## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2026-27ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ, ಖಾಸಗಿ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕ ಕೋರ್ಸುಗಳ ಸೀಟುಗಳ ಪ್ರವೇಶ ಶುಲ್ಕವನ್ನು ನಿಗಧಿಪಡಿಸುವ ಬಗ್ಗೆ.

**ಓದಲಾಗಿದೆ:** 2026-27ನೇ ಸಾಲಿನ ಸ್ನಾತಕ & ಸ್ನಾತಕೋತ್ತರ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಖಾಸಗಿ ಕಾಲೇಜುಗಳ ಸಂಘಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:12.06.2026ರಂದು ನಡೆದ ಸಭಾ ನಡವಳಿಗಳು.

*******

**ಪ್ರಸ್ತಾವನೆ:**

2026-27ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕೋರ್ಸ್ (ಎಂಬಿಬಿಎಸ್/ಬಿಡಿಎಸ್/ಎಂಡಿ/ಎಂಎಸ್ & ಎಂಡಿಎಸ್)ಗಳ ಸೀಟು ಹಂಚಿಕೆ & ಶುಲ್ಕ ನಿಗಧಿಗೆ ಸಂಬಂಧಿಸಿದಂತೆ ಸರ್ಕಾರವು ರಾಜ್ಯದ ಖಾಸಗಿ ಕಾಲೇಜುಗಳ ಸಂಘಗಳಾದ ಕರ್ನಾಟಕ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನ (KPCF), ಕರ್ನಾಟಕ ಅಲ್ಪಸಂಖ್ಯಾತರ ವೃತ್ತಿಪರ ಕಾಲೇಜುಗಳ ಸಂಘ (AMPCK) ಹಾಗೂ ಕರ್ನಾಟಕ ಧಾರ್ಮಿಕ ಮತ್ತು ಭಾಷಾ ಅಲ್ಪಸಂಖ್ಯಾತ ಕಾಲೇಜುಗಳ ಸಂಘ (KRLMPCA) ಸಂಸ್ಥೆಗಳೊಂದಿಗೆ ಪರಸ್ಪರ ಒಪ್ಪಂದದ ಒಡಂಬಡಿಕೆಯನ್ನು ಮಾಡಿಕೊಳ್ಳಬೇಕಾಗಿದೆ. ಮೇಲೆ ಓದಲಾದ ನಡವಳಿಯಲ್ಲಿ 2026-27ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:12.06.2026ರಂದು ನಡೆದ ಸಭೆಯಲ್ಲಿ, ಖಾಸಗಿ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಸಂಘಗಳು ಶುಲ್ಕ ಹೆಚ್ಚಳ ಹಾಗೂ ಇನ್ನಿತರ ಕೆಲವು ಬೇಡಿಕೆಗಳನ್ನು ಸಲ್ಲಿಸಿರುತ್ತಾರೆ.

ಸರ್ಕಾರಿ/ಅನುದಾನರಹಿತ ಖಾಸಗಿ ವೈದ್ಯಕೀಯ/ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಎಲ್ಲಾ ಸ್ನಾತಕ ಕೋರ್ಸಿನ ಸೀಟುಗಳಿಗೂ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು/ಡೀಮ್ಡ್ ವಿಶ್ವವಿದ್ಯಾಲಯಗಳು ಸಂಬಂಧಿತ ಕಾಯ್ದೆಗಳು/ಮುಚ್ಚಳಿಕೆ ಮತ್ತು ಒಪ್ಪಂದ ಪತ್ರಗಳನ್ವಯ ಸರ್ಕಾರಕ್ಕೆ ಬಿಟ್ಟುಕೊಡುವ ಸೀಟುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ 2026-27ನೇ ಸಾಲಿಗೆ ಕೌನ್ಸಿಲಿಂಗ್ ನಡೆಸಿ ಸೀಟು ಹಂಚಿಕೆ ಮಾಡಲು ತೀರ್ಮಾನಿಸಲಾಗಿದೆ.

ಅದರಂತೆ ರಾಜ್ಯದಲ್ಲಿನ ಖಾಸಗಿ ದಂತ ವೈದ್ಯಕೀಯ ಕಾಲೇಜುಗಳಲ್ಲಿನ (KPCF/KRLMPCA/AMPCK) ದಂತ ವೈದ್ಯಕೀಯ (ಬಿಡಿಎಸ್) ಸೀಟುಗಳಿಗೆ ಪಾವತಿಸಬೇಕಾದ ಶುಲ್ಕದಲ್ಲಿ ಯಾವುದೇ ಹೆಚ್ಚಳ ಮಾಡದೇ ಈ ಕೆಳಕಂಡಂತೆ ನಿಗಧಿಪಡಿಸಲು ತೀರ್ಮಾನಿಸಲಾಗಿದೆ.

(ರೂ.ಗಳಲ್ಲಿ)

| ಸಂಖ್ಯೆ | ಕೋರ್ಸುಗಳ ವಿವರ | KPCF/KRLMPCA/AMPCK ಖಾಸಗಿ ಅಭ್ಯರ್ಥಿಗಳಿಗೆ | | ಕೆಇಎ ಮೂಲಕ ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
|---|---|---|---|---|---|
| | | ಹಿಂದಿನ ಸಾಲಿನ ಶುಲ್ಕ (2025-26) | ಪ್ರಸ್ತುತ ಸಾಲಿನ ಶುಲ್ಕ (2026-27) | ಹಿಂದಿನ ಸಾಲಿನ ಶುಲ್ಕ (2025-26) | ಪ್ರಸ್ತುತ ಸಾಲಿನ ಶುಲ್ಕ (2026-27) |
| 1 | ಬಿ.ಡಿ.ಎಸ್. | ರೂ.7,32,625/- | ರೂ.7,32,625/- | ರೂ.83,358/- | ರೂ.83,358/- |

ಮುಂದುವರೆದು, KPCF/KRLMPCA/AMPCK ವ್ಯಾಪ್ತಿಯ ಕಾಲೇಜುಗಳಲ್ಲಿನ ಸ್ನಾತಕ ದಂತ ವೈದ್ಯಕೀಯ ಕೋರ್ಸುಗಳ ಸರ್ಕಾರಿ ಕೋಟಾದ ಸೀಟುಗಳ ಪ್ರವೇಶ ಶುಲ್ಕಕ್ಕೆ ಸಂಬಂಧಿಸಿದಂತೆ,



Scanned with CamScanner

2025-26ನೇ ಸಾಲಿನಲ್ಲಿ ನಿಗಧಿಪಡಿಸಲಾಗಿದ್ದ ಶುಲ್ಕವನ್ನೇ 2026-27ನೇ ಸಾಲಿನಲ್ಲಿಯೂ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಯ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸ್ನಾತಕ ಸೀಟುಗಳಿಗೂ ನಿಗಧಿಪಡಿಸಲು ತೀರ್ಮಾನಿಸಲಾಗಿದೆ. ಪ್ರಸ್ತಾವನೆ ಕುರಿತು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 207 ಆರ್‌ಜಿಯು 2026(ಭಾಗ-1), ಬೆಂಗಳೂರು,**
**ದಿನಾಂಕ:14-08-2026.**

ಸರ್ಕಾರಿ ಸ್ವಾಯತ್ತ ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕ ಕೋರ್ಸಿನ ದಂತ ವೈದ್ಯಕೀಯ (ಬಿ.ಡಿ.ಎಸ್.) ಸೀಟುಗಳಿಗೆ 2026-27ನೇ ಸಾಲಿನಲ್ಲಿ ಈ ಕೆಳಕಂಡಂತೆ ಶುಲ್ಕವನ್ನು ನಿಗಧಿಪಡಿಸಲಾಗಿದೆ.

**(ರೂ. ಗಳಲ್ಲಿ)**

| ಕ್ರ.ಸಂ | ಸ್ನಾತಕ ಕೋರ್ಸಿನ ವಿವರ | ನಿಗಧಿಪಡಿಸಿದ ಶುಲ್ಕ |
|---|---|---|
| 1 | ಬಿ.ಡಿ.ಎಸ್. | ರೂ.40,000/- |

ರಾಜ್ಯದಲ್ಲಿನ ಖಾಸಗಿ ದಂತ ವೈದ್ಯಕೀಯ ಕಾಲೇಜುಗಳಲ್ಲಿನ (KPCF/KRLMPCA/AMPCK) ದಂತ ವೈದ್ಯಕೀಯ (ಬಿ.ಡಿ.ಎಸ್.) ಸೀಟುಗಳಿಗೆ ಪಾವತಿಸಬೇಕಾದ 2026-27ನೇ ಸಾಲಿನ ಶುಲ್ಕವನ್ನು ಈ ಕೆಳಕಂಡಂತೆ ನಿಗಧಿಪಡಿಸಲಾಗಿದೆ.

**(ರೂ. ಗಳಲ್ಲಿ)**

| ಸಂಖ್ಯೆ | ಕೋರ್ಸಿನ ವಿವರ | KPCF/KRLMPCA/AMPCK ವ್ಯಾಪ್ತಿಯ ಕಾಲೇಜುಗಳಲ್ಲಿನ ಖಾಸಗಿ ಕೋಟಾದ ಅಭ್ಯರ್ಥಿಗಳಿಗೆ | | ಕೆಇಎ ಮೂಲಕ ಸರ್ಕಾರಿ ಕೋಟಾದಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ | |
|---|---|---|---|---|---|
| | | ಹಿಂದಿನ ಸಾಲಿನ ಶುಲ್ಕ (2025-26) | ಪ್ರಸ್ತುತ ಸಾಲಿನ ಶುಲ್ಕ (2026-27) | ಹಿಂದಿನ ಸಾಲಿನ ಶುಲ್ಕ (2025-26) | ಪ್ರಸ್ತುತ ಸಾಲಿನ ಶುಲ್ಕ (2026-27) |
| 1 | **ಬಿ.ಡಿ.ಎಸ್.** | ರೂ.7,32,625/- | ರೂ.7,32,625/- | ರೂ.83,358/- | ರೂ.83,358/- |

KPCF/KRLMPCA/AMPCK ವ್ಯಾಪ್ತಿಯ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದಡಿ ಸ್ನಾತಕ ದಂತ ವೈದ್ಯಕೀಯ ಕೋರ್ಸಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನಿಗಧಿಪಡಿಸಿರುವ ರೂ.83,358/-ಗಳ ಶುಲ್ಕವನ್ನೇ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯ ವ್ಯಾಪ್ತಿಯ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದ ಸೀಟುಗಳಿಗೂ ಸಹ ನಿಗಧಿಪಡಿಸಿ ಆದೇಶಿಸಿದೆ.

ಮುಂದುವರೆದು, ಖಾಸಗಿ ವಿಶ್ವವಿದ್ಯಾಲಯ ವ್ಯಾಪ್ತಿಯ ಕಾಲೇಜುಗಳಲ್ಲಿನ ಖಾಸಗಿ ಕೋಟಾದ ಸೀಟುಗಳಿಗೂ ಸಹ 2025-26ನೇ ಸಾಲಿನಲ್ಲಿ ನಿಗಧಿಪಡಿಸಿದ ಶುಲ್ಕವನ್ನೇ 2026-27ನೇ ಸಾಲಿಗೂ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
14/8

**(ಬಿ.ಎನ್.ಪ್ರವೀಣ್)**
ಸರ್ಕಾರದ ಅಧೀನ ಕಾರ್ಯದರ್ಶಿ-3
**ವೈದ್ಯಕೀಯ ಶಿಕ್ಷಣ ಇಲಾಖೆ.**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.
2. ಪ್ರಧಾನ ಮಹಾಲೇಖಪಾಲರು (ಜಿ&ಇ&ಆರ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.



Scanned with CamScanner

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-560001.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ & ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-02.
6. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-560041.
7. ಅಧ್ಯಕ್ಷರು/ಕಾರ್ಯದರ್ಶಿ, ಕೆ.ಪಿ.ಸಿ.ಎಫ್(ಕಾಮೆಡ್-ಕೆ), ನಂ.132, 2ನೇ ಮಹಡಿ, 17ನೇ ಅಡ್ಡರಸ್ತೆ, 17ನೇ ಮುಖ್ಯರಸ್ತೆ, ಮಲ್ಲೇಶ್ವರಂ, ಬೆಂಗಳೂರು-560055.
8. ಅಧ್ಯಕ್ಷರು/ಕಾರ್ಯದರ್ಶಿ, ಕರ್ನಾಟಕ ರಾಜ್ಯ ಧಾರ್ಮಿಕ ಹಾಗೂ ಭಾಷಾ ಅಲ್ಪಸಂಖ್ಯಾತ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಒಕ್ಕೂಟ, (ಕೆ.ಆರ್.ಎಲ್.ಪಿ.ಸಿ.ಎ) ನಂ.143, ಸೂರ್ಯಮುಖಿ ಅಪಾರ್ಟ್‌ಮೆಂಟ್, 4ನೇ ಮಹಡಿ, ವಿಠ್ಠಲ್ ಮಲ್ಯ ರಸ್ತೆ, ಬೆಂಗಳೂರು.
9. ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ಅಲ್ಪಸಂಖ್ಯಾತ ವೃತ್ತಿಪರ ಕಾಲೇಜುಗಳ ಸಂಘ(ಎ.ಎಂ.ಪಿ.ಸಿ.ಕೆ), ಯೂನಿಟ್ ನಂ.205, ಲಕ್ಷ್ಮಿ ಅಪಾರ್ಟ್‌ಮೆಂಟ್ಸ್, ನಂ.06, ಕಾರ್ನ್‌ವೆಲ್ ರಸ್ತೆ, ಲ್ಯಾಂಗ್‌ಫೋರ್ಡ್ ಗಾರ್ಡನ್, ರಿಚ್ಮಂಡ್ ಟೌನ್, ಬೆಂಗಳೂರು-560001.
10. ಸಂಬಂಧಿಸಿದ ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ, ಡೀಮ್ಡ್ ವಿಶ್ವವಿದ್ಯಾಲಯಗಳು ಮತ್ತು ಖಾಸಗಿ ವಿಶ್ವವಿದ್ಯಾಲಯಗಳಿಗೆ ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ -ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಮುಖಾಂತರ.

<u>ಪ್ರತಿಯನ್ನು ಮಾಹಿತಿಗಾಗಿ:-</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned with CamScanner